ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವುದು

886 (818) ಶ್ರೀ ಪಾಟೀಲ್ ಎಂ.ಬಿ. (ಬಬಲೇಶ್ವರ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿ ಅಕ್ರಮ-ಸಕ್ರಮ ಯೋಜನೆ ಅಡಿ ಬಂದ ಅರ್ಜಿಗಳೆಷ್ಟು;

ಆ) ಎಷ್ಟು ಫಲಾನುಭವಿಗಳ ಪಂಪ್‌ಸೆಟ್‌ಗಳನ್ನು ಸಕ್ರಮ ಗೊಳಿಸಲಾಗಿದೆ;

ಇ) ಇನ್ನೂ ಸಕ್ರಮಗೊಳಿಸಬೇಕಾದ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು;

ಈ) ಸಕ್ರಮಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) ಬಿಜಾಪುರ ಜಿಲ್ಲೆಯಲ್ಲಿ ಅನಧಿಕೃತ ನೀರಾವರಿ ಪಂಪ್‌ಸೆಟ್‌ಗಳನ್ನು ಅಕ್ರಮ-ಸಕ್ರಮ ಯೋಜನೆಯಡಿ ಸಕ್ರಮೀಕರಣಗೊಳಿಸಲು 16,497 ಅರ್ಜಿಗಳು ಬಂದಿರುತ್ತವೆ.

ಆ) ಬಿಜಾಪುರ ಜಿಲ್ಲೆಯಲ್ಲಿ ಅಕ್ರಮ-ಸಕ್ರಮ ಯೋಜನೆಯಡಿ 354 ರೈತರ ಅನಧಿಕೃತ ನೀರಾವರಿ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ.

ಇ) ಬಿಜಾಪುರ ಜಿಲ್ಲೆಯಲ್ಲಿ ಸಕ್ರಮಗೊಳಿಸಲು ಬಾಕಿ ಇರುವ ಅನಧಿಕೃತ ನೀರಾವರಿ ಪಂಪ್‌ಸೆಟ್‌ಗಳ ಸಂಖ್ಯೆ 16,143.

ಈ) ನೀರಾವರಿ ಪಂಪು ಸೆಟ್ಟು ಬಳಕೆದಾರರು ಸರ್ಕಾರವು ಪ್ರತಿ ಪಂಪುಸೆಟ್‌ಗೆ ನಿಗಧಿಪಡಿಸಿರುವ ಮೊತ್ತ ರೂ.10,000/-ಗಳನ್ನು ಪಾವತಿಸಿದ ನಂತರ ಸಕ್ರಮಗೊಳಿಸಲಾಗುವುದು. ಅಲ್ಲದೇ, ಅಕ್ರಮ ನೀರಾವರಿ ಪಂಪು ಸೆಟ್ಟುಗಳನ್ನು ಸಕ್ರಮಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಸಹ ಕೈಗೊಳ್ಳಲಾಗಿರುತ್ತದೆ :

1. ರಾಜ್ಯ ಸರ್ಕಾರವು ಸರ್ಕಾರಿ ಆದೇಶ ಸಂಖ್ಯೆ: ಇನ್ 09 ಪಿಎಸ್‌ಆರ್ 2011 ದಿನಾಂಕ: 11-03-2011ರ ಪ್ರಕಾರ, 28-02-2011ರ ಅಂತ್ಯಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಅನಧಿಕೃತ ನೀರಾವರಿ ಪಂಪ್‌ಸೆಟ್‌ಗಳನ್ನು ದಿನಾಂಕ: 30-09-2011 ರೊಳಗೆ (ಕಪ್ಪು ಮತ್ತು ಬೂದು ಪ್ರದೇಶ

ಗಳಲ್ಲಿರುವ ಪಂಪ್‌ಸೆಟ್‌ಗಳೂ ಸೇರಿದಂತೆ) ಸಕ್ರಮೀಕರಣ ಗೊಳಿಸಲು ರೈತರಿಗೆ ಅವಕಾಶ ಕಲ್ಪಿಸಲಾಗಿರುತ್ತದೆ.

2. ಎಲ್ಲಾ ಗ್ರಾಮ ಪಂಚಾಯತಿ / ನಾಡ ಕಛೇರಿಗಳ ನಾಮ ಫಲಕಗಳಲ್ಲಿ ಯೋಜನೆಯ ವಿವರಗಳನ್ನು ಪ್ರಚಾರ ಮಾಡಲಾಗಿರುತ್ತದೆ.
3. ಸಕ್ರಮಗೊಳಿಸುವ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಲಾಗಿರುತ್ತದೆ.
4. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪ್ರಚಾರ ಸಭೆ ನಡೆಸಿ ಯೋಜನೆ ಕುರಿತು ತಿಳುವಳಿಕೆ ನೀಡಲಾಗಿರುತ್ತದೆ.

ದೇವರ ಹಿಪ್ಪರಗಿ ಕ್ಷೇತ್ರ ವ್ಯಾಪ್ತಿಯ ಅಂಗನವಾಡಿ ಕಟ್ಟಡಗಳು

887 (568) ಶ್ರೀ ಪಾಟೀಲ್ ಎ.ಎಸ್. (ನಡಹಳ್ಳಿ) ದೇವರ ಹಿಪ್ಪರಗಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ ದೇವರ ಹಿಪ್ಪರಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಅಂಗನವಾಡಿಗಳು ಕಾರ್ಯನಿರ್ವಹಿಸುತ್ತಿವೆ;

ಆ) ಅವು ಯಾವ ಯಾವ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುತ್ತಿವೆ;

ಇ) ಸದರಿ ಅಂಗನವಾಡಿ ಎಲ್ಲ ಕೇಂದ್ರಗಳಿಗೆ ಸ್ವಂತ ಕಟ್ಟಡಗಳು ಇದೆಯಾ;

ಈ) ಇಲ್ಲದಿದ್ದಲ್ಲಿ, ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳೆಷ್ಟು; ಅವು ಯಾವುವು; ಗ್ರಾಮಗಳ ಹೆಸರು ಸಮೇತ ವಿವರ ಒದಗಿಸುವುದು;

ಉ) ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಸಿ.ಸಿ.ಪಾಟೀಲ್ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಬಿಜಾಪುರ ಜಿಲ್ಲೆಯ ದೇವರ ಹಿಪ್ಪರಗಿ ವಿಧಾನ ಸಭಾ ಕ್ಷೇತ್ರದಲ್ಲಿ ಸಿಂಧಗಿ, ಬಸವನಬಾಗೇವಾಡಿ, ಮುದ್ದೇಬಿಹಾಳ ಶಿಶು ಅಭಿವೃದ್ಧಿ ಯೋಜನೆಗೊಳಪಟ್ಟ 282 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.